ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

10

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 07/12/20

# ಬಿಎಸ್‌ವೈ ನಡೆಗೆ ಆಕ್ಷೇಪ

## ಸಚಿವರು, ಶಾಸಕರ ಅಭಿಪ್ರಾಯ ಸಂಗ್ರಹಿಸಿದ ಉಸ್ತುವಾರಿ ಅರುಣ್ ಸಿಂಗ್

ಪ್ರಜಾವಾಣಿ ತಾರೀಖು 7-12-20

ಬೆಂಗಳೂರು: ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇತ್ತೀಚೆಗೆ ತೆಗೆದುಕೊಂಡ ತೀರ್ಮಾನಗಳ ಕುರಿತು ಹಲವು ಸಚಿವರು, ಶಾಸಕರು ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಎದುರು ಭಾನುವಾರ ಆಕ್ಷೇಪ ವ್ಯಕ್ತಪಡಿಸಿದರು.



ಏಕಪಕ್ಷೀಯ ತೀರ್ಮಾನಗಳಿಗೆ ತಡೆ ಹಾಕಿ, ಪಕ್ಷ ಮತ್ತು ಸರ್ಕಾರದ ನಡುವೆ ಸಮನ್ವಯ ಸಾಧಿಸುವ ಮೂಲಕ ಬಣ ರಾಜಕಾರಣಕ್ಕೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಬೇಕು ಎಂದೂ ಬೇಡಿಕೆ ಮುಂದಿಟ್ಟಿದರು.

ಪಕ್ಷದ ರಾಜ್ಯ ಉಸ್ತುವಾರಿಯಾದ ಬಳಿಕ ಮೊದಲ ಬಾರಿಗೆ ಬಿಜೆಪಿ ಕಚೇರಿಗೆ ಭೇಟಿ ನೀಡಿದ ಅರುಣ್ ಸಿಂಗ್, ಸಚಿವರು, ಶಾಸಕರು ಮತ್ತು ಪಕ್ಷದ ಪ್ರಮುಖರ ಜೊತೆಗೆ ಪ್ರತ್ಯೇಕವಾಗಿ ಸಭೆ ನಡೆಸಿದರು. ಪಕ್ಷದಲ್ಲಿನ ಬಣ ರಾಜಕಾರಣ, ನಿಗಮ, ಮಂಡಳಿಗಳ ನೇಮಕಾತಿ, ಸಂಪುಟ ವಿಸ್ತರಣೆ ಪ್ರಸ್ತಾವ ಸೇರಿ ಹಲವು ವಿಷಯಗಳ ಕುರಿತು ಅಭಿಪ್ರಾಯಪಡೆದರು.

ಪಕ್ಷದಲ್ಲಿನ ಬೆಳವಣಿಗೆಗಳ ಕುರಿತು ಶಾಸಕರ ಅಭಿಪ್ರಾಯ ಆಲಿಸುವಂತೆ ರಾಜ್ಯ ಘಟಕದ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್‌ಗೆ ಪತ್ರ ಬರೆದಿದ್ದ ವಿಧಾನಸಭೆಯಲ್ಲಿ ಸರ್ಕಾರದ ಮುಖ್ಯ ಸಚೇತಕರೂ ಆಗಿರುವ ಶಾಸಕ ವಿ.ಸುನೀಲ್ ಕುಮಾರ್, ಉಪ ಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ, ಸಚಿವರಾದ ಆರ್.ಅಶೋಕ, ವಿ.ಸೋಮಣ್ಣ, ಕೆ.ಗೋಪಾಲಯ್ಯ, ಎಸ್.ಟಿ. ಸೋಮಶೇಖರ್, ಭೈರತಿ ಬಸವರಾಜ, ಸಂಸದ ಪಿ.ಸಿ.ಮೋಹನ್, ಬಿಜೆಪಿ ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ಸಂಸದ ತೇಜಸ್ವಿ ಸೂರ್ಯ, ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ಸೇರಿ ಹಲವರ ಜತೆ ಅರುಣ್ ಸಿಂಗ್ ಪ್ರತ್ಯೇಕವಾಗಿ ಸಭೆ ನಡೆಸಿ, ಅಹವಾಲು ಆಲಿಸಿದರು.

ಏಕಪಕ್ಷೀಯ ತೀರ್ಮಾನಕ್ಕೆ ಆಕ್ಷೇಪ: ನಿಗಮ ಮತ್ತು ಮಂಡಳಿಗಳ ನೇಮಕಾತಿಯಲ್ಲಿ ಪಕ್ಷದ ಮೂಲ ಕಾರ್ಯಕರ್ತರು ಹಾಗೂ ಪಕ್ಷಕ್ಕಾಗಿ ದುಡಿದವರಿಗೆ ಅವಕಾಶ ನೀಡಿಲ್ಲ. ಮುಖ್ಯಮಂತ್ರಿ ಮತ್ತು ಅವರ ಮಗ ಬಿ.ವೈ.ವಿಜಯೇಂದ್ರ ಅವರ ಆಪ್ತರಿಗೆ ಮಹತ್ವದ ಸ್ಥಾನಗಳನ್ನು ನೀಡಲಾಗಿದೆ ಎಂಬ ಆಕ್ಷೇಪವನ್ನು ಹಲವರು ವ್ಯಕ್ತಪಡಿಸಿದ್ದಾರೆ. ಬಾಕಿ ಇರುವ ನಿಗಮ, ಮಂಡಳಿಗಳಿಗೆ ನೇಮಿಸಲು ಮೂಲ ಕಾರ್ಯಕರ್ತರನ್ನೇ ಪರಿಗಣಿಸಬೇಕು ಎಂಬ ಬೇಡಿಕೆ ಮುಂದಿಟ್ಟಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

## ಚಳಿಗಾಲದ ಅಧಿವೇಶನಕ್ಕೆ ಮಸೂದೆಗಳ ಬಿಸಿ

ವಿಧಾನಮಂಡಲದ ಉಭಯ ಸದನಗಳ ಚಳಿಗಾಲದ ಅಧಿವೇಶನದಲ್ಲಿ ಗೋಹತ್ಯೆ ನಿಷೇಧ ಮತ್ತು 'ಲವ್ ಜಿಹಾದ್' ತಡೆಗೆ ಕಾಯ್ದೆ ರೂಪಿಸಲು ಮಸೂದೆ ಮಂಡಿಸುವ ಸಾಧ್ಯತೆ ಇದ್ದು, ಇದು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳ ಮಧ್ಯೆ ಕಾವೇರಿದ ಚರ್ಚೆಗೆ ಕಾರಣವಾಗುವ ಸಾಧ್ಯತೆ ಇದೆ. ಅಧಿವೇಶನ ಸೋಮವಾರದಿಂದ ಆರಂಭವಾಗಲಿದೆ.

ಗೋಹತ್ಯೆ ನಿಷೇಧಕ್ಕೆ ಕಠಿಣ ಕಾಯ್ದೆ ಜಾರಿ ತರಲಾಗುವುದು. ಈ ಅಧಿವೇಶನದಲ್ಲಿ ಮಸೂದೆಯನ್ನು ಮಂಡಿಸುವುದಾಗಿ ಪಶುಸಂಗೋಪನೆ ಸಚಿವ ಪ್ರಭು ಚವ್ಹಾಣ್ ಹಾಗೂ 'ಲವ್ ಜಿಹಾದ್' ತಡೆಗೆ ಸಂಬಂಧಿಸಿದಂತೆ ಮಸೂದೆ ಮಂಡಿಸಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಇವೆರಡೂ ಮಸೂದೆಗಳ ಮಂಡನೆಗೆ ಕಾಂಗ್ರೆಸ್ ತೀವ್ರ ವಿರೋಧ ವ್ಯಕ್ತಪಡಿಸಿದೆ. ಇದನ್ನು ಪ್ರತಿಭಟಿಸಿ ಉಗ್ರ ಹೋರಾಟ ನಡೆಸುವುದಾಗಿ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ. ಆದರೆ, ಇವೆರಡೂ ಕಾಯ್ದೆಗಳನ್ನು ರೂಪಿಸುವ ಸಂಬಂಧ ಬೆಳಗಾವಿಯಲ್ಲಿ ನಡೆದ ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸಭೆ ನಿರ್ಣಯ ತೆಗೆದುಕೊಂಡಿದೆ.

'ಉಪಚುನಾವಣೆ ಸಂದರ್ಭದಲ್ಲಿ ಮುಖ್ಯಮಂತ್ರಿ ಕಳುಹಿಸಿದ್ದ ಹಣವನ್ನು ಸಿ.ಪಿ.ಯೋಗೇಶ್ವರ್ ನನಗೆ ತಲುಪಿಸಿಲ್ಲ' ಎಂದು ವಿಧಾನಪರಿಷತ್ ಸದಸ್ಯ ಎಚ್. ವಿಶ್ವನಾಥ್ ಅವರು ನೀಡಿರುವ ಹೇಳಿಕೆ ಬಗ್ಗೆ ಕಾಂಗ್ರೆಸ್ ಈಗಾಗಲೇ ಎಸಿಬಿಗೆ ದೂರು ನೀಡಿದ್ದು, ಈ ವಿಷಯವೂ ವಾಗ್ವಾದಕ್ಕೆ ದಾರಿ ಮಾಡುವ ಸಾಧ್ಯತೆ ಇದೆ.

## ಗೋಹತ್ಯೆ ನಿಷೇಧ ಮಸೂದೆಗೆ ವಿರೋಧ

'ಗೋಹತ್ಯೆ ನಿಷೇಧ ಮತ್ತು ಲವ್ ಜಿಹಾದ್ ತಡೆ ಕಾಯ್ದೆ ರೂಪಿಸಲು ವಿಧಾನಮಂಡಲ ಅಧಿವೇಶನದಲ್ಲಿ ಮಸೂದೆ ಮಂಡಿಸಿದರೆ ನಾವು ವಿರೋಧಿಸುತ್ತೇವೆ' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದರು.



ಉಭಯ ಸದನಗಳ ಪಕ್ಷದ ಹಿರಿಯ ಸದಸ್ಯರ ಜೊತೆ ಭಾನುವಾರ ಸಮಾಲೋಚಿಸಿದ ಬಳಿಕ ಮಾತನಾಡಿದ ಅವರು, 'ಅಧಿವೇಶನದ ಕಾರ್ಯಸೂಚಿ ಇನ್ನೂ ಆಗಿಲ್ಲ. ಏನೇನು ಚರ್ಚೆ ಮಾಡಬೇಕು ಅಂದುಕೊಂಡಿದ್ದಾರೊ ಗೊತ್ತಿಲ್ಲ' ಎಂದರು.

'ಗೋಹತ್ಯೆ ನಿಷೇಧ ಕಾಯ್ದೆ ಹಾಗೂ ಲವ್ ಜಿಹಾದ್ ಕಾಯ್ದೆ ತರಲು ಬಿಜೆಪಿ ಕಾರ್ಯಕಾರಿಣಿಯಲ್ಲಿ ಚರ್ಚಿಸಲಾಗಿದೆ. ಗ್ರಾಮ ಪಂಚಾಯಿತಿ ಚುನಾವಣೆ ಇರುವುದರಿಂದ ನೀತಿ ಸಂಹಿತೆ ಜಾರಿಯಲ್ಲಿದೆ. ಇಂಥ ಸಂದರ್ಭದಲ್ಲಿ ಈ ರೀತಿಯ ಕಾಯ್ದೆ ತರಲು ಅವಕಾಶ ಇಲ್ಲ. ಅಲ್ಲದೆ, ಈ ಕಾಯ್ದೆಗಳು ಜನರ ಮೇಲೆ ಪರಿಣಾಮ ಬೀರಲಿವೆ' ಎಂದರು.

'ಸರ್ಕಾರ ಎಷ್ಟು ಸಾಲ ತೆಗೆದುಕೊಂಡಿದೆ. ರಾಜ್ಯದ ಆರ್ಥಿಕ ಸ್ಥಿತಿ ಹೇಗಿದೆ ಎಂಬ ಬಗ್ಗೆ ಶ್ವೇತ ಪತ್ರ ಮಂಡಿಸಬೇಕು' ಎಂದೂ ಸಿದ್ದರಾಮಯ್ಯ ಆಗ್ರಹಿಸಿದರು.

'ಕಳೆದ ಬಾರಿಯ ನೆರೆ ಹಾವಳಿಯಿಂದ ಸಂತ್ರಸ್ತರಾದವರಿಗೆ ಸರ್ಕಾರ ಇನ್ನೂ ಪರಿಹಾರ ನೀಡಿಲ್ಲ. ಈಗ ಬಿಜೆಪಿಯವರು ಹೊಸ ಸಮಸ್ಯೆಗಳನ್ನು ಹುಟ್ಟು ಹಾಕುತ್ತಿದ್ದಾರೆ. ಮನೆಗಳನ್ನು ಕಟ್ಟಲು ಅನುದಾನ ಕೊಟ್ಟಿಲ್ಲ. ಅವರಿಗೆ ಬೇಕಾದವರಿಗೆ ಅನುದಾನ ಕೊಡಲು ಅನ್‌ಲಾಕ್ ಮಾಡುತ್ತಾರೆ. ಬೇಡದವರಿಗೆ ಕೊಡಲ್ಲ' ಎಂದೂ ದೂರಿದರು.

# ಚಳಿಗಾಲದ ಅಧಿವೇಶನಕ್ಕೆ ಮಸೂದೆಗಳ ಬಿಸಿ

ಒಂದನೇ ಪುಟದಿಂದ...

ಕೋವಿಡ್ ಪರಿಸ್ಥಿತಿಯ ನಿರ್ವಹಣೆ, ಮೃತಪಟ್ಟವರ ಸಂಖ್ಯೆಯ ವಿಚಾರವಾಗಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ದಾಖಲೆಗಳ ಸಮೇತ ಸಿದ್ದರಾಮಯ್ಯ ಸಿದ್ಧತೆ ನಡೆಸಿಕೊಂಡಿದ್ದಾರೆ. ಕೋವಿಡ್ ನಿರ್ವಹಣೆಯಲ್ಲಿ ಆಗಿರುವ ಖರ್ಚು- ವೆಚ್ಚಗಳು, ರೋಗದಿಂದ ಸತ್ತವರ ವಿಚಾರದಲ್ಲಿ ಸರ್ಕಾರ ತಪ್ಪು ಮಾಹಿತಿಗಳನ್ನು ನೀಡಿದೆ ಎಂದೂ ಅವರು ಆರೋಪಿಸಿದ್ದಾರೆ.

ಕಳೆದ ಅಧಿವೇಶನದಲ್ಲಿ ಮೇಲ್ಮನೆಯಲ್ಲಿ ಅಂಗೀಕಾರಗೊಳ್ಳದ ಮತ್ತು ಮಂಡನೆಯಾಗದ ಭೂಸುಧಾರಣೆ, ಕಾರ್ಮಿಕ ಮತ್ತು ಎಪಿಎಂಸಿ ತಿದ್ದುಪಡಿ ಮಸೂದೆಗಳು ಈ ಬಾರಿ ಪುನಃ ಮಂಡನೆಯಾಗಲಿವೆ.

ವಿವಿಧ ನಿಗಮಗಳ ರಚನೆ ಮತ್ತು ಅವುಗಳ ಅನುದಾನ ನೀಡಿಕೆಯ ಕುರಿತೂ ಚರ್ಚೆ ನಡೆಯುವ ಸಂಭವವಿದೆ. ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಎಸ್. ಆರ್.ಸಂತೋಷ್ ಆತ್ಮಹತ್ಯೆ ಯತ್ನದ ವಿಷಯವೂ ಪ್ರಸ್ತಾಪವಾಗಲಿದೆ.

ಇತ್ತೀಚಿನ ದಿನಗಳಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ಬಗ್ಗೆ ಮೃದು ಧೋರಣೆ ತಾಳಿದ್ದಾರೆ. ಸರ್ಕಾರ ಇಕ್ಕಟಿಗೆ ಸಿಲುಕಿದ ಸಂದರ್ಭದಲ್ಲಿ ಪರೋಕ್ಷವಾಗಿ ಬೆಂಬಲಕ್ಕೆ ನಿಲ್ಲಬಹುದು ಎಂದೂ ಹೇಳಲಾಗುತ್ತಿದೆ.

**ಒಂದು ದೇಶ-ಒಂದು ಚುನಾವಣೆ:** ಅಧಿವೇಶನದ ಕೊನೆಯ ಎರಡು ದಿನಗಳು 'ಒಂದು ದೇಶ, ಒಂದು ಚುನಾವಣೆ' ವಿಷಯ ಕುರಿತು ಚರ್ಚೆ ನಡೆಸಲು ನಿರ್ಧರಿಸಲಾಗಿದೆ. ಇತ್ತೀಚೆಗೆ ನಡೆದ ವಿಧಾನಸಭಾಧ್ಯಕ್ಷರ ಸಮ್ಮೇಳನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಈ ವಿಷಯವಾಗಿ ದೇಶವ್ಯಾಪಿ ಚರ್ಚೆ ನಡೆಯಬೇಕು ಎಂದು ಹೇಳಿದ್ದರು. ಆದ್ದರಿಂದ, ಈ ವಿಷಯವನ್ನು ಸದನದಲ್ಲಿ ಗಂಭೀರವಾಗಿ ಚರ್ಚಿಸಲಾಗುವುದು ಎಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

## ಸಭಾಪತಿ ವಿರುದ್ಧ ಅವಿಶ್ವಾಸ

ವಿಧಾನಪರಿಷತ್ ಸಭಾಪತಿ ಕೆ.ಪ್ರತಾಪಚಂದ್ರ ಶೆಟ್ಟಿ ಅವರ ವಿರುದ್ಧ ಇದೇ ಅಧಿವೇಶನದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸುವುದಾಗಿ ಪರಿಷತ್ ಕಾರ್ಯದರ್ಶಿಗೆ ಬಿಜೆಪಿ ಈಗಾಗಲೇ ನೋಟಿಸ್ ನೀಡಿದೆ. ಈ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ಮಧ್ಯೆ ಹೊಂದಾಣಿಕೆ ಆಗುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ.

ಸಭಾಪತಿ ಪದಚ್ಯುತಿಗೆ ಜೆಡಿಎಸ್ ಬೆಂಬಲ ನೀಡಿದರೆ ಪ್ರತಿಯಾಗಿ ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡಬೇಕಾಗುತ್ತದೆ. ಈ ದಿಸೆಯಲ್ಲಿ ಮಾತುಕತೆಗಳು ನಡೆದಿವೆ ಎಂದು ಮೂಲಗಳು ತಿಳಿಸಿವೆ.

'ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿಯವರು ಸದನದಲ್ಲಿ ನಿಷ್ಪಕ್ಷವಾಗಿ ವರ್ತಿಸದೇ ಕಾಂಗ್ರೆಸ್ ಸದಸ್ಯರಂತೆ ನಡೆದುಕೊಳ್ಳುತ್ತಿದ್ದಾರೆ ಎಂಬ ಭಾವನೆ ಮೂಡಿದೆ. ಸದಸ್ಯರಲ್ಲಿ ಅವರ ಬಗ್ಗೆ ವಿಶ್ವಾಸವಿಲ್ಲ. ಶಾಸಕಾಂಗ ಕರ್ತವ್ಯ ನಿರ್ವಹಣೆಯಲ್ಲಿ ಪಕ್ಷಪಾತಿಯಾಗಿದ್ದು, ಸಂವಿಧಾನದ ಆಶಯಕ್ಕೆ ಧಕ್ಕೆ ತಂದಿದ್ದಾರೆ' ಎಂದು ನೋಟಿಸ್‌ನಲ್ಲಿ ಬಿಜೆಪಿ ತಿಳಿಸಿದೆ.

---

# ಬಿಎಸ್‌ವೈ ನಡೆಗೆ ಆಕ್ಷೇಪ

ಒಂದನೇ ಪುಟದಿಂದ...

ಪಕ್ಷ ಹಾಗೂ ಶಾಸಕಾಂಗ ಪಕ್ಷದ ಸಭೆಯಲ್ಲಿ ಚರ್ಚಿಸದೇ ಮರಾಠಾ ಅಭಿವೃದ್ಧಿ ನಿಗಮ ಮತ್ತು ವೀರಶೈವ-ಲಿಂಗಾಯತ ಅಭಿವೃದ್ಧಿ ನಿಗಮಗಳನ್ನು ರಚಿಸಲಾಗಿದೆ. ವೀರಶೈವ-ಲಿಂಗಾಯತರನ್ನು ಕೇಂದ್ರ ಸರ್ಕಾರದ ಹಿಂದುಳಿದ ವರ್ಗಗಳ (ಒಬಿಸಿ) ಪಟ್ಟಿಗೆ ಸೇರಿಸಲು 'ಶಿಫಾರಸು ಮಾಡುವ ಪ್ರಸ್ತಾವವನ್ನೂ ಏಕಪಕ್ಷೀಯವಾಗಿ ಸಿದ್ಧಪಡಿಸಲಾಗಿದೆ. ಪಕ್ಷ ಮತ್ತು ಸರ್ಕಾರದ ನಡುವೆ ಸಂಬಂಧವೇ ಇಲ್ಲದಂತಹ ಸ್ಥಿತಿಯಿದೆ ಎಂದೂ ಶಾಸಕರು ದೂರಿದ್ದಾರೆ ಎಂದು ಮೂಲಗಳು ತಿಳಿಸಿವೆ.

'ನಿಗಮ, ಮಂಡಳಿಗಳ ನೇಮಕಾತಿಯಲ್ಲಿ ಮೂಲ ಕಾರ್ಯಕರ್ತರಿಗೆ ಅನ್ಯಾಯ ಆಗುವುದನ್ನು ತಡೆಯುವುದು ಹಾಗೂ ಬಣ ರಾಜಕಾರಣಕ್ಕೆ ಕಡಿವಾಣ ಹಾಕದಿದ್ದರೆ ಪಕ್ಷದ ಸಂಘಟನೆಯ ಮೇಲೆ ವ್ಯತಿರಿಕ್ತ ಪರಿಣಾಮವಾಗಲಿದೆ. ಪಕ್ಷದ ನಾಯಕತ್ವಕ್ಕೆ ಮುಜುಗರ ಆಗದಂತೆ ಸಮನ್ವಯ ಸಾಧಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು' ಎಂಬ ಅಭಿಪ್ರಾಯವನ್ನು ಸುನೀಲ್ ಕುಮಾರ್ ಹಂಚಿಕೊಂಡಿದ್ದಾರೆ ಎಂದು ಗೊತ್ತಾಗಿದೆ.

ಸೋಮಶೇಖರ್ ಸೇರಿದಂತೆ ಕೆಲವು ಸಚಿವರು ಗ್ರಾಮ ಪಂಚಾಯಿತಿ ಚುನಾವಣೆ ಸಿದ್ಧತೆ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ. ಎಲ್ಲರ ಅಭಿಪ್ರಾಯಗಳನ್ನೂ ಆಲಿಸಿದ ಅರುಣ್ ಸಿಂಗ್, ವರಿಷ್ಠರ ಜತೆ ಚರ್ಚೆ ನಡೆಸುವ ಭರವಸೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಬಹಿರಂಗವಾಗಿ ಯಾರೂ ಹೇಳಿಕೆ ನೀಡದಂತೆ ತಾಕೀತು ಮಾಡಿದ್ದಾರೆ ಎಂದು ಶಾಸಕರೊಬ್ಬರು 'ಪ್ರಜಾವಾಣಿ'ಗೆ ತಿಳಿಸಿದರು.

## ವಿಜಯೇಂದ್ರ ಹಸ್ತಕ್ಷೇಪ: ಆರೋಪ

'ಮುಖ್ಯಮಂತ್ರಿ ಮಗ ಬಿ.ವೈ.ವಿಜಯೇಂದ್ರ ಸರ್ಕಾರದ ಕೆಲಸಗಳಲ್ಲಿ ಅತಿಯಾಗಿ ಹಸ್ತಕ್ಷೇಪ ಮಾಡುತ್ತಾರೆ' ಎಂದು ಹಲವರು ಪಕ್ಷದ ರಾಜ್ಯ ಉಸ್ತುವಾರಿ ಎದುರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ನಿಗಮ, ಮಂಡಳಿಗಳ ನೇಮಕಾತಿ, ಅಧಿಕಾರಿಗಳ ವರ್ಗಾವಣೆ ಸೇರಿದಂತೆ ಎಲ್ಲ ವಿಚಾರಗಳು ವಿಜಯೇಂದ್ರ ಸೂಚನೆಯಂತೆಯೇ ತೀರ್ಮಾನಗಳಾಗುತ್ತಿವೆ ಎಂಬುದಾಗಿ ಶಾಸಕರು ದೂರಿದ್ದಾರೆ ಎಂದು ಮೂಲಗಳು ಹೇಳಿವೆ.

## 'ಸಂಪುಟ ವಿಸ್ತರಣೆಗೆ ಅನುಮತಿ ಸಿಕ್ಕಿಲ್ಲ'

'ಸಚಿವ ಸಂಪುಟ ವಿಸ್ತರಣೆಗೆ ಬಿಜೆಪಿಯ ವರಿಷ್ಠರು ಅನುಮತಿ ನೀಡಿಲ್ಲ. ಎರಡು ಅಥವಾ ಮೂರು ದಿನಗಳಲ್ಲಿ ಸಂಪುಟ ವಿಸ್ತರಣೆ ನಡೆಯುವ ಪ್ರಶ್ನೆಯೇ ಇಲ್ಲ' ಎಂದು ಕಂದಾಯ ಸಚಿವ ಆರ್.ಅಶೋಕ ತಿಳಿಸಿದರು.

ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಭೇಟಿಗೂ ಮುನ್ನ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, 'ಅರುಣ್ ಸಿಂಗ್ ಸೇರಿದಂತೆ ಪಕ್ಷದ ವರಿಷ್ಠರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಜತೆ ಚರ್ಚಿಸಿದ ಬಳಿಕ ಎಲ್ಲವೂ ನಿರ್ಧಾರವಾಗಲಿದೆ' ಎಂದರು.

## ಮನವೊಲಿಕೆಗೆ ಮುಖ್ಯಮಂತ್ರಿ ಯತ್ನ

ಸಚಿವರು, ಶಾಸಕರ ಅಭಿಪ್ರಾಯ ಸಂಗ್ರಹದ ಬಳಿಕ ಮುಖ್ಯಮಂತ್ರಿಯವರ ಅಧಿಕೃತ ನಿವಾಸ 'ಕಾವೇರಿ'ಗೆ ಭೇಟಿ ನೀಡಿದ ಅರುಣ್ ಸಿಂಗ್, ಯಡಿಯೂರಪ್ಪ ಜೊತೆ ಮಧ್ಯಾಹ್ನದ ಭೋಜನ ಸವಿದರು. ಆಗ ಸಿಂಗ್ ಜತೆಗೆ ಚರ್ಚಿಸಿದ ಮುಖ್ಯಮಂತ್ರಿ, ಸಂಪುಟ ವಿಸ್ತರಣೆಯ ಅನಿವಾರ್ಯತೆ ತಿಳಿಸಿ ಮನವೊಲಿಸಲು ಯತ್ನಿಸಿದ್ದಾರೆ.